ವಿದ್ಯಾರ್ಥಿ ನಿಲಯಗಳು

1661 (987); ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿವೆಯೇ;

ಆ) ಹಾಗಿದ್ದಲ್ಲಿ, ಅತ್ಯಂತ ಹಿಂದುಳಿದ ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ ಪ್ರೀ ಮೆಟ್ರಿಕ್ ಮತ್ತು ಮೆಟ್ರಿಕ್ ನಚಿತರದ (ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳು ಹೆಚ್ಚು ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಇ) ಬಂದಿದಲ್ಲಿ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಅಂಕಸಮುದ್ರ ಮತ್ತು ಉಪನಾಯಕನಹಳ್ಳಿ ಗ್ರಾಮಗಳಲ್ಲಿ ಎಸ್.ಸಿ. ಪ್ರೀ ಮೆಟ್ರಿಕ್ ಮತ್ತು ಬೆಣಕಲ್ಲಿ ಗ್ರಾಮದಲ್ಲಿ ಎಸ್.ಟಿ. ನಿಲಯ ಹಾಗೂ ಅಂಬಳಿ ಗ್ರಾಮದಲ್ಲಿ ಬಿ.ಸಿ.ಎಂ. ಹಾಗೂ ತಂಬ್ರಹಳ್ಳಿ ಗ್ರಾಮದಲ್ಲಿ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ (ಬಾಲಕರ ಮತ್ತು ಬಾಲಕಿಯರ) ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು. (ವಿವರಗಳನ್ನು ನೀಡುವುದು)

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರದಲ್ಲಿ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಲ್ಲಿ, ಹೊಸ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗೆ ಅನುದಾನದ ಲಭ್ಯತೆ ಮತ್ತು ಅಗತ್ಯತೆ ಆಧಾರದ ಮೇಲೆ ಮಂಜೂರು ಮಾಡಲು ಪರಿಶೀಲಿಸಲಾಗುವುದು.